ಆ) ಹಾಗಿದ್ದಲ್ಲಿ, ಈ ಯೋಜನೆಯ ಅಂದಾಜು ಎಷ್ಟು; ಈ ಯೋಜನೆಯನ್ನು ಕಾರ್ಯಗತಗೊಳಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಹಾಗಿಲ್ಲದಿದ್ದಲ್ಲಿ, ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸಲು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗುವುದೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಬಂದಿದೆ.

ಆ) ಈ ಕುರಿತಂತೆ, ಯೋಜನೆ ರೂಪಿಸಲು ಪರಿಶೀಲಿಸಲಾಗುತ್ತಿದೆ.

ಇ) ಪ್ರಶ್ನಿತ ಯೋಜನೆಯ ತಾಂತ್ರಿಕ ಮತ್ತು ಆರ್ಥಿಕ ಕಾರ್ಯ ಸಿಂಧುತ್ವದ ಆಧಾರದ ಮೇಲೆ ಸರ್ಕಾರವು ಸೂಕ್ತ ಕೈಗೊಳ್ಳುವುದು.

ಕೊಪ್ಪ ಗ್ರಾಮಕ್ಕೆ ಕುಡಿಯುವ ನೀರು ಯೋಜನೆ

549 (641) ಶ್ರೀ ಸುರೇಶ್ ಗೌಡ (ನಾಗಮಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ಕೊಪ್ಪ ಹೋಬಳಿ ಕೊಪ್ಪ ಹಾಗೂ ಸುತ್ತಲಿನ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಕೊಪ್ಪ ಕೆರೆ ಮೂಲದಿಂದ ಒದಗಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ;

ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಹೌದು.

ಆ) ಈ ಯೋಜನೆಯ ಆರ್ಥಿಕ ಮತ್ತು ತಾಂತ್ರಿಕ ಕಾರ್ಯಸಿಂಧುತ್ವ ಹಾಗೂ ಅನುದಾನ ಲಭ್ಯತೆ ಆಧರಿಸಿ, ಸರ್ಕಾರವು ಮುಂದಿನ ಕ್ರಮ ಕೈಗೊಳ್ಳಲಿದೆ.